**ದಿನಾಂಕ :19–12–2020ರಂದು ಶನಿವಾರ ಬೆಳಗ್ಗೆ 11:00 ಅನ್ನಸಂದ್ರ ಪಾಳ್ಯದ, ಬಿ.ಬಿ.ಎಂ.ಪಿ ಯೋಗ ಸೆಂಟರ್‌ನಲ್ಲಿ ವಾರ್ಡ್ ಸಂಖ್ಯೆ:87ರ, ಶ್ರೀ.ವಿಜಯ ಕುಮಾರ್ ಸಹಾಯಕ ಕಾರ್ಯಪಾಲಕ ಅಭಿಯಂತರರು (Nodel Officer) ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

**ಹಾಜರಿದ್ದ ಅಧಿಕಾರಿಗಳು :**

| | |
|---|---|
| 1. | ಶ್ರೀ.ಹೆಚ್.ಚಂದ್ರಪ್ಪ (ಸಹಾಯಕ ಅಭಿಯಂತರರು) |
| 2. | ಶ್ರೀ. ರಾಘವೇಂದ್ರ ಕೆ.ವಿ, ಹಿರಿಯ ಆರೋಗ್ಯ ಪರಿವೀಕ್ಷಕರು |
| 3. | ಶ್ರೀ.ಆರ್.ಸುಂಕಪ್ಪ |
| 4. | ಶ್ರೀ.ವಿ.ನಾಗರಾಜ ರೆಡ್ಡಿ |
| 5. | ಜಾನಸನ್ (ಮಾರ್ಶ್‌ಲ್) |
| 6. | ಎ.ದೇವರಾಜುಲು |
| 7. | ಎನ್.ಕೃಷ್ಣ ರಾಡ್ಡಿ |
| 8. | ಎಂ.ಎಸ್.ಬಾಲ ಸುಬ್ರಮಣ್ಯ |
| 9. | ಬಿ.ಸಿ.ಮುರುಗ |
| 10. | ನಿವಾಸಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |

ಮಾನ್ಯ ಅಧ್ಯಕ್ಷರು ಹಾಜರಿದ್ದ ಅಧಿಕಾರಿಗಳು, ವಾರ್ಡ್ ಸಮಿತಿ ಸದಸ್ಯರು ಹಾಗೂ ರೆಸಿಡೆಂಟ್ಸ್ ವೆಲ್ಫೇರ್ ಅಸೋಸಿಯೆಷನ್‌ನ ಅಧ್ಯಕ್ಷರುಗಳು, ಪ್ರತಿನಿದಿಗಳು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸುತ್ತಾ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಈ ಹಿಂದೆ ನಡೆದ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡಲಾಯಿತು.

ಪ್ರಪಂಚದಾದ್ಯಂತ ಕೋವಿಡ್–19 ಮಹಾಮಾರಿ ರೋಗವು ಹರುಡುತ್ತಿರುವುದು ಗಮನಾರ್ಹವಾಗಿ ಕಡಿಮೆಯಾಗಿರುವದನ್ನು ಸಭೆಯ ಗಮನಕ್ಕೆ ತರುತ್ತಾ ಯಾವುದೇ ಕಾರಣಕ್ಕೂ ಸಾರ್ವಜನಿಕ ಪ್ರದೇಶಗಳಲ್ಲಿ ಮುಖ ಗವಸು ಇಲ್ಲದೇ ಅಂತರ ಕಾಯ್ದುಕೊಳ್ಳದೇ ಇರಬಾರದೆಂದು ಕಾಲಕಾಲಕ್ಕೆ ಸ್ಯಾನಿಟೈಸರ್ಸ್‌ಗಳನ್ನು ಉಪಯೊಗಿಸಿಕೊಂಡು ಮಹಾಮಾರಿ ರೋಗದಿಂದ ದೂರವಿರಲು ಕೋರಲಾಯಿತು ಹಾಗೂ ಸ್ಥಳೀಯ ನಿವಾಸಿ ಕ್ಷೇಮಾಬಿವೃದ್ಧಿ ಸಂಘಗಳು ಈ ದಿಸೆಯಲ್ಲಿ ಸಾರ್ವಜನಿಕರಿಗೆ ತಿಳುವಳಿಕೆ ಉಂಟು ಮಾಡುವಂತೆ ಕೊರಲಾಯಿತು.

ಕ್ರಮ:ಹಿರಿಯ ಆರೋಗ್ಯ ನಿರೀಕ್ಷಕರು



Scanned with CamScanner

ಈ ಹಿಂದೆ ನಡೆದ ವಾರ್ಡ್ ಸಮಿತಿ ಸಬೆಯಲ್ಲಿ ತಿರ್ಮಾನಿಸದಂತೆ ವಾರ್ಡ್ ಸಮಿತಿಯ ಸಭೆಯನ್ನು ವಾರ್ಡ್ ಸಂಖ್ಯೆ:87ರ ಅನ್ನಸಂದ್ರ ಪಾಳ್ಯದ ಯೋಗ ಸೆಂಟರ್‌ನಲ್ಲಿ ನಡೆಸಲಾಯಿತು, ಶ್ರೀ. ಎಂ.ಎಸ್.ಬಾಲ ಸುಬ್ರಮಣ್ಯ ರವರು ಮಾತನಾಡಿ ಇನ್ನು ಮುಂದೆಯು ಸಹ ಯೋಗ ಸೆಂಟರ್‌ನಲ್ಲಿ ವಾರ್ಡ್ ಸಮಿತಿ ಸಭೆಯನ್ನು ನಡೆಸಬೇಕು ಎಂದು ಕೋರಿದರು ಹಾಗೂ ಯೋಗ ಸೆಂಟರ್ ಬಳಿ ಇದ್ದ ತ್ಯಾಜ್ಯವನ್ನು ತೆಗಿಸಿರುವುದರಿಂದ ಮೆಚ್ಚುಗೆ ವ್ಯಕ್ತ ಪಡಿಸಿದರು.

ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ ಯಲ್ಲಾಮ್ಮ ದೇವಸ್ಥಾನ ರಸ್ತೆ ಹಾಗೂ ಕಾವೇರಮ್ಮ ದೇವಸ್ಥಾನ ರಸ್ತೆಗಳು ಆಳಾಗಿದ್ದು ಅದನ್ನು ಕೂಡಲೇ ಸರಿ ಪಡಿಸಲು ಕೋರಿದರು.

ಕ್ರಮ:ವಾರ್ಡ್ ಅಭಿಯಂತರರು

ಶ್ರೀ.ದೇವರಾಜು ರವರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ ವಿನಾಯಕ ನಗರ 3ನೇ ಕ್ರಾಸ್‌ನಲ್ಲಿ ನೀರು ಸರಬರಾಜುವಾಗುತ್ತಿಲ್ಲ ಮತ್ತು ಪೈಪ್ ಲೈನ್ ಅಳವಡಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಬಿ.ರವರನ್ನು ಕೋರಿದರು.

ಕ್ರಮ: ಸ.ಕಾ.ಅ, ಬಿ.ಡಬ್ಲ್ಯೂ.ಎಸ್.ಬಿ.

ಶ್ರೀ.ನಾಗರಾಜ್ ರವರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ ವಿಭೂತಿಪುರದ ಮುಖ್ಯ ರಸ್ತೆಯ ಪಾದಚಾರಿ ಮಾರ್ಗದಲ್ಲಿ ತಳ್ಳು ಗಾಡಿಯವರು ರಸ್ತೆ ಮತ್ತು ಪುಟ್‌ಪಾತ್‌ನಲ್ಲಿ ನಿಲ್ಲಿಸಿ ವ್ಯಾಪಾರ ಮಾಡುತ್ತಿರುವ ಕಾರಣ ಟ್ರಾಫಿಕ್ ಸಮಸ್ಯೆಯಾಗುತ್ತಿರುವುದನ್ನು ಸಭೆಯ ಗಮನಕ್ಕೆ ತಂದು, ತಳ್ಳುವ ಗಾಡಿರವರಿಗೆ ಲೈಸೆನ್ಸ್ ನೀಡಬಾರದೆಂದು ಕೋರಿದರು.

ಕ್ರಮ:ವಾರ್ಡ್ ಅಭಿಯಂತರರು ಮತ್ತು
ಟ್ರಾಫಿಕ್ ಪೋಲಿಸ್

ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್‌ನ ಶ್ರೀ.ಚಂದ್ರಪ್ಪ ರೆಡ್ಡಿರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ಇಸ್ಲಾಂಪುರ ಮುಖ್ಯ ರಸ್ತೆಯಲ್ಲಿ ಒಳ ಚರಂಡಿ ತ್ಯಾಜ್ಯ ವಸ್ತುಗಳ ರಾಶಿ ಇರುವುದನ್ನು ಕೂಡಲೇ ತೆರವುಗೊಳಿಸಲು ಕೋರಿದರು, ಹಾಗೂ ಸುಂಕಪ್ಪ ರವರ ಮಾತನಾಡಿ ಅನ್ನಸಂದ್ರ ಪಾಳ್ಯ 4ನೇ ಅಡ್ಡ ರಸ್ತೆಯಲ್ಲಿ ಒಳಚರಂಡಿ ತುಂಬಾ ಹಾಳಾಗಿದ್ದು ದುರಸ್ಥಿ ಗೊಳಿಸಲು ಸೂಚಿಸಿದರು.

ಕ್ರಮ:ವಾರ್ಡ್ ಅಭಿಯಂತರರು ಹಾಗೂ
ಸ.ಕಾ.ಅ ಬಿಡಬ್ಲ್ಯೂ.ಎಸ್.ಎಸ್.ಬಿ

ಶ್ರೀ.ವೆಂಕಟಸ್ವಾಮಿ ರೆಡ್ಡಿ ರವರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ ಕೃಷ್ಣ ಅಪಾರ್ಟ್‌ಮೆಂಟ್ ರಸ್ತೆಯಲ್ಲಿ ತ್ಯಾಜ್ಯ ವಸ್ತುಗಳಿಂದ ಒಳಚರಂಡಿ ಬ್ಲಾಕ್ ಅಗಿದ್ದು ಈ ಕೂಡಲೇ ತೆರವುಗೊಳಿಸಲು ಸೂಚಿಸಿದರು.

ಶ್ರೀ.ಮುರುಗ ರವರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯಲ್ಲಿ ಆಲಾಗಿರುವ ವಿದ್ಯುತ್ ದ್ವೀಪಗಳನ್ನು ಸರಿಪಡಿಸಲು ಕೋರಿದರು.



Scanned with CamScanner

ವಾರ್ಡ್ ವ್ಯಾಪ್ತಿಯಲ್ಲಿ ಫುಟ್‌ಪಾತ್ ಮೇಲಿರುವ ಸ್ಲ್ಯಾಬ್‌ಗಳು ಸರಿಯಾಗಿ ಜೋಡಣೆಗೊಂಡಿಲ್ಲದಿರುವ ಕಾರಣ ವಯಸ್ಕರು ಹಾಗೂ ಮಕ್ಕಳು ಓಡಾಡಲು ತೊಂದರೆಯುಗುತ್ತಿರುವುದನ್ನು ಸಭೆಯ ಗಮನಕ್ಕೆ ತಂದರು.

ಕ್ರಮ:ವಾರ್ಡ್ ಅಭಿಯಂತರರು

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು
ವಾರ್ಡ್ ನಂ.87 ಹೆಚ್.ಎ.ಎಲ್ ಏರ್‌ಪೋರ್ಟ್

ವಾರ್ಡ್ ಸಮಿತಿ ಅಧ್ಯಕ್ಷಕರು ಹಾಗೂ
ನೋಡೆಲ್ ಅಧಿಕಾರಿಗಳು

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು, ಬಿಬಿಎಂಪಿ, ಮಹದೇವಪುರ ವಲಯ ರವರ ಮಾಹಿತಿಗಾಗಿ ಗೌರವ ಪೂರ್ವಕವಾಗಿ ಸಲ್ಲಿಸಿದೆ.
2. ತೋಟಗಾರಿಕೆ ಅಧೀಕ್ಷಕರು, ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್.
3. ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಚ್.ಎ.ಎಲ್ ಏರ್‌ಪೋರ್ಟ್ ಉಪವಿಭಾಗ.
4. ಕಂದಾಯ ಅಧಿಕಾರಿಗಳು/ಸಹಾಯಕ ಕಂದಾಯ ಅಧಿಕಾರಿಗಳು/ನಿರೀಕ್ಷಕರು, ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್.
5. ಕಲ್ಯಾಣ ಶಾಖೆ ಅಧಿಕಾರಿಗಳು, ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್.
6. ಎಸ್.ಡಬ್ಲ್ಯೂ.ಎಂ, ಅಧಿಕಾರಿಗಳು/ಗುತ್ತಿಗೆದಾರರು, ಜಯನಗರ ಶಾಪಿಂಗ್ ಕಾಂಪ್ಲೆಕ್ಸ್ 9ನೇ ಮಹಡಿ, ಬೆಂಗಳೂರು–11.
7. ವಿದ್ಯುತ್ ವಿಭಾಗದ, ಅಧಿಕಾರಿಗಳು/ಗುತ್ತಿಗೆದಾರರು ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್.
8. ಆರೋಗ್ಯ ಅಧಿಕಾರಿಗಳು ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್.
9. ಸಹಾಯಕ ನಿದೇಶಕರು ಪಶುಪಾಲನೆ ಅಧಿಕಾರಿಗಳು/ಗುತ್ತಿಗೆದಾರರು ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್.
10. ಬಿ.ಡಬ್ಲ್ಯೂ.ಎಸ್.ಎಸ್.ಬಿ, ಅಧಿಕಾರಿಗಳು/ಗುತ್ತಿಗೆದಾರರು ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್.
11. ಟ್ರಾಫೀಕ್/ಸಿವಿಲ್ ಪೋಲಿಸ್, ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್.
12. ರೆಸಿಡೆನ್ಸ್ ವೆಲ್‌ಫೇರ್ ಆಸೋಸಿಯೇಷನ್ಸ, ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್.
13. ವಾರ್ಡ್‌ಗೆ ಸಂಬಂಧಿಸಿದ ಎನ್.ಜಿ.ಓ ಗಳು ಹೆಚ್.ಎ. ಎಲ್ ಏರ್‌ಪೋರ್ಟ್ ವಾರ್ಡ್.
14. ವಾರ್ಡ್‌ಗೆ ಸಂಬಂಧಿಸಿದ, ಎಸ್.ಸಿ/ಎಸ.ಟಿ ಸಂಘಟನೆಗಳು.
15. ವಾರ್ಡ್‌ನ ಆಸಕ್ತಿಯುಳ್ಳ ವಾಲೆಂಟಿಯರ್ಸ್.



Scanned with CamScanner